**ಕರ್ನಾಟಕ ಸರ್ಕಾರ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052.

ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2023-24 ದಿನಾಂಕ:20.12.2023.

**2023-24 ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಕುರಿತು.**

## ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು
## (Instructions to the Students)

1. **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭ್ಯರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯವನ್ನು ಪಡೆಯಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.**
2. 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನ ಪ್ರಾರಂಭಿಸಿರಬೇಕು (ದಿನಾಂಕ:30.01.2023 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು).
3. ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಮಾಸಿಕ ರೂ.10,000/- ದಂತೆ ಗರಿಷ್ಠ 3 ವರ್ಷಗಳ ಅವಧಿಗೆ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ಪ್ರವರ್ಗವಾರು, ಮೀಸಲಾತಿ, ಮೆರಿಟ್ ಹಾಗೂ ಅನುದಾನ ಲಭ್ಯತೆಗೆ ಅನುಗುಣವಾಗಿ ಹಾಗೂ ನಿಯಮಾನುಸಾರ ಅರ್ಹ ಅಭ್ಯರ್ಥಿಗಳಿಗೆ ನೀಡಲಾಗುವುದು.

4. **ನಿಗದಿಪಡಿಸಿರುವ ಅರ್ಹತೆಗಳು**:
   (a) ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
   (b) ಕರ್ನಾಟಕ ಸರ್ಕಾರದ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
   (c) ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಹಾಗೂ ಕರ್ನಾಟಕದಲ್ಲಿರುವ ಸಂಸ್ಥೆಗಳಲ್ಲಿ ಪೂರ್ಣಾವಧಿ (Full Time) ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.
   (d) ಈ ಸೌಲಭ್ಯವನ್ನು ಪಡೆಯಲಿಚ್ಛಿಸುವ ಅಭ್ಯರ್ಥಿಯು ಭಾರತ ಸರ್ಕಾರ/ಕರ್ನಾಟಕ ಸರ್ಕಾರ/ ವಿಶ್ವವಿದ್ಯಾಲಯ ಅಥವಾ ಇತರೆ ಯಾವುದೇ ಸಂಸ್ಥೆಗಳಿಂದ ಮಾಸಿಕ ವ್ಯಾಸಂಗ ವೇತನ/ ಫೆಲೋಶಿಪ್ ಗೆ ಆಯ್ಕೆಯಾಗಿರಬಾರದು ಹಾಗೂ ಫೆಲೋಶಿಪ್ ಪಡೆದಿರಬಾರದು/ಪಡೆಯಬಾರದು. ಒಂದು ಬಾರಿ ಈ ಇಲಾಖೆಯಿಂದ ಫೆಲೋಶಿಪ್ ಗೆ ಆಯ್ಕೆಯಾದ ನಂತರ ಯಾವುದೇ ಕಾರಣದಿಂದ ಬೇರೆ ಫೆಲೋಶಿಪ್ ಗೆ ಆಯ್ಕೆ ಬಯಸಿ ಅರ್ಜಿ ಸಲ್ಲಿಸುವಂತಿಲ್ಲ ಹಾಗೂ ಪಿಎಚ್.ಡಿ ಅಧ್ಯಯನವನ್ನು ಅರ್ಧಕ್ಕೆ ಮೊಟಕುಗೊಳಿಸುವಂತಿಲ್ಲ. ಒಂದು ವೇಳೆ ಬೇರೆ ಫೆಲೋಶಿಪ್ ಗೆ ಆಯ್ಕೆಯಾದಲ್ಲಿ ಅಥವಾ ಪಿಎಚ್.ಡಿ ಅಧ್ಯಯನವನ್ನು ಅರ್ಧಕ್ಕೆ ಮೊಟಕುಗೊಳಿಸಿದಲ್ಲಿ ಅಂತಹ ಅಭ್ಯರ್ಥಿಯು ಈ ಇಲಾಖೆಯಿಂದ ಪಡೆದಿರುವ ಎಲ್ಲಾ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ಸರ್ಕಾರಕ್ಕೆ ಹಿಂದಿರುಗಿಸಬೇಕಾಗುತ್ತದೆ.

5. **ಶೈಕ್ಷಣಿಕ ಅರ್ಹತೆಗಳು:**
   (a) ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ **ಶೇ.55** ಅಂಕಗಳನ್ನು ಪಡೆದಿರಬೇಕು.
   (b) ವಿಶ್ವ ವಿದ್ಯಾಲಯ/ ಅಧಿಕೃತ ಸಂಸ್ಥೆಗಳಲ್ಲಿ ಸಂಶೋಧನಾ ಮಾರ್ಗದರ್ಶಕರಡಿಯಲ್ಲಿ ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿಕೊಂಡಿರಬೇಕು.
   (c) ಅಭ್ಯರ್ಥಿಗಳು ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನಕ್ಕಾಗಿ ಮಾಡಿಸಿರುವ ನೋಂದಾಣಿ ದಿನಾಂಕವು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿರಬೇಕು.
6. **ವಯೋಮಿತಿ:** ಅಭ್ಯರ್ಥಿಯ ಗರಿಷ್ಠ ವಯೋಮಿತಿ 35 ವರ್ಷಗಳು.
7. **ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಗಾಗಿ ನಿಗಿದಿಪಡಿಸಿರುವ ಅಭ್ಯರ್ಥಿ ಮತ್ತು ಕುಟುಂಬ ಒಟ್ಟು ವಾರ್ಷಿಕ ಆದಾಯಮಿತಿ**.
   (a) ಪ್ರವರ್ಗ-1 – ರೂ.4.50 ಲಕ್ಷ.
   (b) ಪ್ರವರ್ಗ-2(ಎ), 3(ಎ) ಮತ್ತು 3(ಬಿ) – ರೂ.3.50 ಲಕ್ಷ.

8. ತಹಶೀಲ್ದಾರರಿಂದ ಪಡೆಯುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವು ಕಡ್ಡಾಯವಾಗಿ ಅಭ್ಯರ್ಥಿಯ ಹೆಸರಿನಲ್ಲಿಯೇ ಇರಬೇಕು ಹಾಗೂ ಅದು expiry ಆಗಿರಬಾರದು.
9. ಕೇಂದ್ರ/ರಾಜ್ಯ ಸರ್ಕಾರಿ/ ಅನುದಾನಿತ ಸಂಸ್ಥೆ/ ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳ ಉದ್ಯೋಗಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಲ್ಲ.
10. ಒಂದೇ ಕುಟುಂಬದ ಗರಿಷ್ಠ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.
11. ಒಬ್ಬ ಅಭ್ಯರ್ಥಿಗೆ ಒಂದು ಬಾರಿ ಮಾತ್ರ ಪಿಎಚ್.ಡಿ ಅಧ್ಯಯನಕ್ಕಾಗಿ ಈ ಸೌಲಭ್ಯವನ್ನು ನೀಡಲಾಗುವುದು.
12. **ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ**:
   (a) ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಅರ್ಹ ಅಭ್ಯರ್ಥಿಗಳು ಆಫ್-ಲೈನ್ ಮೂಲಕ ಸೂಕ್ತ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸುವುದು.

**ಆಫ್-ಲೈನ್ ಅರ್ಜಿ (2 ಭಾವಚಿತ್ರ ಒಳಗೊಂಡಂತೆ) ಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು-**

- ಎಸ್.ಎಸ್.ಎಲ್.ಸಿ/10ನೇ ತರಗತಿಯ ಅಂಕಪಟ್ಟಿ.
- ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
- ವಾಸಸ್ಥಳ ಪ್ರಮಾಣ ಪತ್ರ.
- ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳು.
- ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ (Convocation Certificate).
- ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿರುವ ಬಗ್ಗೆ ವಿಶ್ವವಿದ್ಯಾಲಯ/ಅಧಿಕೃತ ಸಂಸ್ಥೆಯಿಂದ ಪ್ರಮಾಣ ಪತ್ರ (ಇದರಲ್ಲಿ ನೋಂದಣಿ ದಿನಾಂಕವು ಕಡ್ಡಾಯವಾಗಿ ನಮೂದಾಗಿರಬೇಕು)
- ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ಶಿಕ್ಷಣ ಸಂಸ್ಥೆ/ಕಾಲೇಜು/ವಿಶ್ವವಿದ್ಯಾಲಯ/ ಅಧಿಕೃತ ಸಂಸ್ಥೆಯಿಂದ ನಿಗದಿತ ನಮೂನೆಯಲ್ಲಿ ದೃಢೀಕರಣ ಪತ್ರ. (ಇದಕ್ಕೆ ಸಂಬಂಧಿಸಿದ ನಮೂನೆಯನ್ನು ಇಲಾಖಾ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಭರ್ತಿ ಮಾಡಿ ಸಂಬಂಧಿಸಿದವರಿಂದ ದೃಢೀಕರಿಸಿ ಸಲ್ಲಿಸುವುದು).
- ಬ್ಯಾಂಕ್ ಖಾತೆ ವಿವರ - ಆಯ್ಕೆಯಾಗುವ ಅರ್ಹ ಅಭ್ಯರ್ಥಿಗಳಿಗೆ ಆಧಾರ್ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ಮಾತ್ರ ವ್ಯಾಸಂಗ ವೇತನ ಪಾವತಿಸುವುದರಿಂದ,

ಅಭ್ಯರ್ಥಿಗಳು ತಮ್ಮ ಆಧಾರ್ ಲಿಂಕ್ ಆಗಿರುವ ಮತ್ತು ಪ್ರಸಕ್ತ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ವಿವರವನ್ನು ಮಾತ್ರ ನೀಡುವುದು (ಜಂಟಿ/ಮೈನರ್ ಬ್ಯಾಂಕ್ ಖಾತೆಗಳ ವಿವರ ಸಲ್ಲಿಸಿದಲ್ಲಿ, ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು).

- ಆಧಾರ್ ಕಾರ್ಡ್ ಪ್ರತಿ.
- ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಮತ್ತು ಕರ್ನಾಟಕ ರಾಜ್ಯದಲ್ಲಿರುವ ವಿಶ್ವವಿದ್ಯಾಲಯದಲ್ಲಿ 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನಕ್ಕೆ ದಾಖಲಾಗಿರುವ ಶುಲ್ಕದ ರಶೀದಿ.
- ವಿಶೇಷ ಚೇತನ ಅಭ್ಯರ್ಥಿಯಾಗಿದ್ದಲ್ಲಿ, ಆ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
- ಅಭ್ಯರ್ಥಿಯ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ 2 ಭಾವಚಿತ್ರಗಳು.
- ಮುಚ್ಚಳಿಕೆ ಪ್ರಮಾಣ ಪತ್ರ (ನಮೂನೆ ಇಲಾಖಾ ವೆಬ್-ಸೈಟ್ ನಲ್ಲಿ ಲಭ್ಯವಿರುತ್ತದೆ. ರೂ.20/- ರ ಛಾಪಾ ಕಾಗದ [ಒಂದನೇ ಪಾರ್ಟಿ ಅಭ್ಯರ್ಥಿ ಹಾಗೂ 2ನೇ ಪಾರ್ಟಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಎಂಬುದಾಗಿ ಛಾಪಾ ಕಾಗದ ಪಡೆಯುವುದು] ದಲ್ಲಿ ಮಾಹಿತಿ ನಮೂದಿಸಿ ಸಹಿಗಳನ್ನೊಳಗೊಂಡ Original ಪ್ರತಿ ಸಲ್ಲಿಸಬೇಕು. )

13. ಆಫ್-ಲೈನ್ ಅರ್ಜಿಯ ಪ್ರತಿ ಹಾಗೂ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಅಭ್ಯರ್ಥಿಗಳು, ಆಯಾ ಸಂಸ್ಥೆ/ಕಾಲೇಜು/ವಿಶ್ವವಿದ್ಯಾಲಯಗಳಿರುವ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಿ, ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿಕೊಳ್ಳುವುದು ಹಾಗೂ ತಮ್ಮ ಅರ್ಜಿ ಮತ್ತು ಮುಚ್ಚಳಿಕೆ ಪತ್ರವನ್ನು ಹೊರತುಪಡಿಸಿ ಎಲ್ಲಾ ಮೂಲ ದಾಖಲೆಗಳನ್ನು ಸ್ಥಳದಲ್ಲಿಯೇ ಹಿಂಪಡೆಯುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
14. ನಿಗದಿತ ದಿನಾಂಕದ ನಂತರ ಸಲ್ಲಿಸುವ ಯಾವುದೇ ಮನವಿ/ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
15. ಅಭ್ಯರ್ಥಿಗಳು ಸ್ನಾತಕೋತ್ತರ ಪದವಿಯಲ್ಲಿ ಪಡೆದಿರುವ ಅಂಕಗಳು, ಪ್ರವರ್ಗವಾರು ಮೀಸಲಾತಿ ಹಾಗೂ ಅನುದಾನ ಲಭ್ಯತೆಗೆ ಅನುಗುಣವಾಗಿ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.
16. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ವಿಳಾಸವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವೆಬ್ ಸೈಟ್ **https://bcwd.karnataka.gov.in** ನಲ್ಲಿ ಲಭ್ಯವಿರುತ್ತದೆ.
17. ಅರ್ಜಿ ಹಾಗೂ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಅಭ್ಯರ್ಥಿಗಳು ತಾವು ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ವಿಶ್ವವಿದ್ಯಾಲಯ/ಸಂಸ್ಥೆ ಇರುವಂತಹ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಲು ಕೊನೆಯ ದಿನಾಂಕ: 10.01.2024 ಸಂಜೆ 5.30 ಗಂಟೆ.
18. ಸಹಾಯವಾಣಿ ಸಂಖ್ಯೆ: 8050770004 (ಕಛೇರಿಯ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 05.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.